# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **770 (884)** |
| ಸದಸ್ಯರ ಹೆಸರು | : | ಶ್ರೀ ಸಿ.ಎನ್.ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 22-08-2025. (19) |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಪ್ರಶ್ನೆ | | ಉತ್ತರ |
|---|---|---|
| ಅ. | ರಾಜ್ಯದ ಏಕೈಕ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ಕೃಷಿ ತೋಟಗಾರಿಕೆ ಪಶು ಸಂಗೋಪನೆ ಹಾಗೂ ಅರಣ್ಯ ಕಾಲೇಜುಗಳನ್ನು ಸೇರಿಸಿ ಸಮಗ್ರ ವಿಶ್ವವಿದ್ಯಾಲಯ ಸ್ಥಾಪಿಸಲು ಸರ್ಕಾರ ಮುಂದಾಗಿದೆಯೇ. | 2024-25ನೇ ಸಾಲಿನ ಆಯವ್ಯಯ ಘೋಷಣೆಯನ್ವಯ ಮಂಡ್ಯ ಜಿಲ್ಲೆಯ ವಿಶ್ವೇಶ್ವರಯ್ಯ ಚಾನಲ್ ಫಾರಂ (ವಿ.ಸಿ.ಫಾರಂ) ಇಲ್ಲಿ ನೂತನ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವನೆಗೆ ಸಂಬಂಧಿಸಿದಂತೆ ದಿನಾಂಕ:13.01.2025 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ರಾಜ್ಯಾದ್ಯಂತ ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಮತ್ತು ಅರಣ್ಯ ಕಾಲೇಜುಗಳನ್ನು ಮರು ಸಂಘಟಿಸಲು ತಜ್ಞರ ಸಮಿತಿಯನ್ನು ರಚಿಸುವಂತೆ ಸೂಚಿಸಲಾಗಿರುತ್ತದೆ.<br><br>ಅದರಂತೆ, ಸರ್ಕಾರದ ಆದೇಶ ಸಂಖ್ಯೆ: AGRI 11 AUB 2024, ದಿನಾಂಕ:25.03.2025 ರಲ್ಲಿ ಶ್ರೀ ಟಿ.ಎಂ. ವಿಜಯಭಾಸ್ಕರ್, ಭಾ.ಆ.ಸೇ, ನಿವೃತ್ತ ಮುಖ್ಯ ಕಾರ್ಯದರ್ಶಿಗಳು ಹಾಗೂ ಮಾಜಿ ಅಧ್ಯಕ್ಷರು, 2ನೇ ಆಡಳಿತ ಸುಧಾರಣಾ ಆಯೋಗ ಇವರ ಅಧ್ಯಕ್ಷತೆಯಲ್ಲಿ ಕೃಷಿ ತೋಟಗಾರಿಕೆ, ಪಶುಸಂಗೋಪನೆ ಮತ್ತು ಅರಣ್ಯ ಕಾಲೇಜುಗಳ ಮರುಸಂಘಟನೆ ಬಗ್ಗೆ ತಜ್ಞರ ಸಮಿತಿ (Re-organisation of Agricultural Universities) ಯನ್ನು ರಚಿಸಲಾಗಿದೆ. |
| ಆ. | ಸಮಗ್ರ ವಿಶ್ವವಿದ್ಯಾಲಯ ಸ್ಥಾಪಿಸಲು ಮುಂದಾಗಿರುವುದಕ್ಕೆ ಕಾರಣಗಳೇನು; | ಕೃಷಿ, ಜೈವಿಕ ತಂತ್ರಜ್ಞಾನ, ಆಹಾರ ತಂತ್ರಜ್ಞಾನ, ಕೃಷಿ ಇಂಜಿನಿಯರಿಂಗ್, ಸಮೂಹ ವಿಜ್ಞಾನ, ಕೃಷಿ ವ್ಯವಹಾರ ನಿರ್ವಹಣೆ, ಕೃಷಿ ಮಾರುಕಟ್ಟೆ ತೋಟಗಾರಿಕೆ, ಅರಣ್ಯ, ರೇಷ್ಮೆ, ಹಾಗೂ ಇತರ ಸಸ್ಯಧಾರಿತ ವಿಜ್ಞಾನಗಳು ಒಂದಕ್ಕೊಂದು ಪೂರಕವಾಗಿರುವುದರಿಂದ ಈ ವಿಷಯಗಳಿಗೆ ಪ್ರತ್ಯೇಕ ಪ್ರತ್ಯೇಕವಾದ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸುವುದು ಕೃಷಿಕರ ಅಭಿವೃದ್ಧಿಯ ದೃಷ್ಟಿಯಿಂದ ಸೂಕ್ತವಾಗಿರುವುದಿಲ್ಲ ಹಾಗೂ ಇದರಿಂದ ಮೂಲ ಉದ್ದೇಶವನ್ನು ಸಾಧಿಸಿದಂತಾಗುವುದಿಲ್ಲ. ವಿವಿಧ ವಿಷಯಗಳ ವಿಶ್ವವಿದ್ಯಾಲಯಗಳ ಸಮನ್ವಯತೆಯ |
| ಇ. | ಸಮಗ್ರ ವಿಶ್ವವಿದ್ಯಾಲಯ ಸ್ಥಾಪನೆಗೆ ಹಾಗೂ ಪ್ರತ್ಯೇಕ ತೋಟಗಾರಿಕೆ ವಿಶ್ವವಿದ್ಯಾಲಯ ಹೊಂದಿರುವುದರಲ್ಲೂ ಕಂಡು ಬಂದ ಸಾಧಕ – ಬಾಧಕಗಳೇನು; | |

| | | |
|---|---|---|
| | | ಕೊರತೆಯು ರೈತರ ಹಿತಾಸಕ್ತಿಗಳಿಗೆ ಮಾರಕವಾಗಿ ಪರಿಣಮಿಸಬಹುದಾಗಿದೆ. ರಾಜ್ಯದಲ್ಲಿ ಶೇ.85 ರಷ್ಟು ಭೂಹಿಡುವಳಿದಾರರ ಸಣ್ಣ ಮತ್ತು ಅತೀ ಸಣ್ಣ ರೈತರಾಗಿದ್ದು, ಇವರನ್ನು ಆರ್ಥಿಕವಾಗಿ ಸಬಲರನ್ನಾಗಿ ಮಾಡಲು ಸಮಗ್ರ ಕೃಷಿ ಪದ್ಧತಿಯನ್ನು ಅಳವಡಿಸಲು ಸರ್ಕಾರವು ಹೆಚ್ಚಿನ ಗಮನವನ್ನು ನೀಡುವ ಅವಶ್ಯಕತೆ ಇರುತ್ತದೆ. ಪ್ರಸ್ತುತ ಸಮಯದಲ್ಲಿ ಸಮಗ್ರ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಸ್ಥಾಪನೆಯಿಂದ ರೈತರ ಅನೇಕ ಸಮಸ್ಯೆಗಳಿಗೆ ವಿಶೇಷವಾಗಿ ಸಣ್ಣ ಮತ್ತು ಅತೀ ಸಣ್ಣ ರೈತರಿಗೆ ಒಂದೇ ಮೂಲದಿಂದ ಪರಿಹಾರ ದೊರಕಿಸಬಹುದಾಗಿರುತ್ತದೆ ಎಂಬ ಆಶಯದೊಂದಿಗೆ ಸಮಗ್ರ ವಿಶ್ವವಿದ್ಯಾಲಯ ಸ್ಥಾಪನೆಗೆ ಸಮಿತಿಯನ್ನು ರಚಿಸಲಾಗಿರುತ್ತದೆ. |
| ಈ. | ತೋಟಗಾರಿಕಾ ವಿಶ್ವವಿದ್ಯಾಲಯವನ್ನು ಸಮಗ್ರ ವಿಶ್ವವಿದ್ಯಾಲಯ ವ್ಯಾಪ್ತಿಗೆ ತರಲು ಅಧ್ಯಯನ ಸಮಿತಿ ರಚಿಸುವುದಕ್ಕೆ ತೋಟಗಾರಿಕೆ ಕ್ಷೇತ್ರದ ತಜ್ಞರಿಂದ ವಿರೋಧ ಇರುವುದನ್ನು ಸರ್ಕಾರ ಮನಗಂಡಿದೆಯೇ; | ಅಧ್ಯಯನ ಸಮಿತಿ ರಚಿಸುವುದಕ್ಕೆ ವಿರೋಧ ವ್ಯಕ್ತಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಉ) | ಹಾಗಿದ್ದಲ್ಲಿ ಈ ಪ್ರಸ್ತಾವನೆಯನ್ನು ಸರ್ಕಾರ ಕೈಬಿಡುವುದೇ? | ತಜ್ಞರ ಸಮಿತಿಯ ವರದಿ ಹಾಗೂ ಶಿಫಾರಸ್ಸುಗಳ ಆಧಾರದ ಮೇರೆಗೆ ಪರಿಶೀಲಿಸಬೇಕಾಗಿರುತ್ತದೆ. |

ಸಂಖ್ಯೆ: AGRI/92/AUB/2025

(ಎನ್. ಚಲುವರಾಯಸ್ವಾಮಿ)
ಕೃಷಿ ಸಚಿವರು